ಉದಯಕಾಲ

## ಬೆಳಗಾವಿ ಸುವರ್ಣ ಸೌಧದಲ್ಲಿ ಡಿಸೆಂಬರ್‌ನಲ್ಲಿ ಅಧಿವೇಶನ | ವಿ.ಪ. ಸಭಾಪತಿ ಹೊರಟ್ಟಿ ಹೇಳಿಕೆ

# ಚಳಿಗಾಲ ಅಧಿವೇಶನ ವೀಕ್ಷಣೆಗೆ ವೆಬ್ ಕ್ಯಾಸ್ಟಿಂಗ್ ಮೂಲಕ ನೇರಪ್ರಸಾರ

**ಉದಯಕಾಲ ನ್ಯೂಸ್**

**ಬೆಳಗಾವಿ:** ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಇದೇ ಡಿಸೆಂಬರ್‌ನಲ್ಲಿ ನಡೆಯಲಿರುವ ಚಳಿಗಾಲ ಅಧಿವೇಶನದ ಕಲಾಪವನ್ನು ಸಾರ್ವಜನಿಕರು ವೀಕ್ಷಿಸಲು ಅನುಕೂಲವಾಗುವಂತೆ ಮೊದಲ ಬಾರಿ ವೆಬ್ ಕ್ಯಾಸ್ಟಿಂಗ್ ಮೂಲಕ ನೇರಪ್ರಸಾರ ವ್ಯವಸ್ಥೆ ಮಾಡಲಾಗುವುದು ಎಂದು ವಿಧಾನಪರಿಷತ್ತಿನ ಸಭಾಪತಿಯವರಾದ ಬಸವರಾಜ ಹೊರಟ್ಟಿ ತಿಳಿಸಿದರು.





ಚಳಿಗಾಲದ ಅಧಿವೇಶನ ಹಿನ್ನೆಲೆಯಲ್ಲಿ ವೆಬ್ ಕ್ಯಾಸ್ಟಿಂಗ್ ಮೂಲಕ ನೇರ ಪ್ರಸಾರ ಮಾಡುವ ಕುರಿತು ಸೋಮವಾರ ಸುವರ್ಣ ವಿಧಾನಸೌಧದಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಅವರು ಈ ವಿಷಯ ತಿಳಿಸಿದರು. ವೆಬ್ ಕ್ಯಾಸ್ಟಿಂಗ್‌ಗೆ ಅಗತ್ಯವಾದ ಎಲ್ಲ ಸೌಕರ್ಯಗಳನ್ನು ಒದಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪ್ರತಿಯೊಂದು ಇಲಾಖೆಯ ಕಚೇರಿಯಲ್ಲಿ ಇ-ಆಫೀಸ್ ಬಳಕೆ ಮಾಡುತ್ತಿರುವುದರಿಂದ ಇಂಟರ್ನೆಟ್ ಸೇರಿದಂತೆ ಎಲ್ಲ ಸಮರ್ಪಕ ಸೌಲಭ್ಯಗಳನ್ನು ಒಂದು ವಾರದೊಳಗೆ ಒದಗಿಸುವಂತೆ ತಿಳಿಸಿದರು.

ಸುವರ್ಣ ವಿಧಾನಸೌಧದ ಸಭಾಂಗಣದಲ್ಲಿ ವಿಡಿಯೋ ಕಾನ್ಫರೆನ್ಸ್ ಮಾಡಲು ವ್ಯವಸ್ಥೆ ಕಲ್ಪಿಸಬೇಕು.

ಸಾರ್ವಜನಿಕರು ವಿಧಾನಮಂಡಲ ಅಧಿವೇಶನದ ಕಲಾಪ ನೇರವಾಗಿ ವೀಕ್ಷಿಸಲು ಅನುಕೂಲ ಕಲ್ಪಿಸಲು ಏನೆಲ್ಲಾ ಸೌಕರ್ಯಗಳನ್ನು ಕಲ್ಪಿಸಬೇಕಿದೆಯೋ ಅವೆಲ್ಲವನ್ನೂ ಒದಗಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶಕ ನೀಡಿದರು. ಅಧಿವೇಶನ ಎಲ್ಲ ರೀತಿಯಿಂದ ಸುಗಮವಾಗಿ ನಡೆಯಬೇಕು. ಈ ನಿಟ್ಟಿನಲ್ಲಿ ಕೆಲಸ ಕಾರ್ಯಗಳನ್ನು ತ್ವರಿತವಾಗಿ ಆರಂಭಿಸಬೇಕು ಎಂದರು. ಇದಕ್ಕೂ ಮುಂಚೆ ಪರಿಷತ್ತಿನ ಸಭಾಂಗಣವನ್ನು ಪರಿಶೀಲಿಸಿದ ಸಭಾಪತಿ ಬಸವರಾಜ ಹೊರಟ್ಟಿ ಅವರು ಬೆಳಗಾವಿಯಲ್ಲಿ ಮೊದಲ ಅಧಿವೇಶನ ಆರಂಭಗೊಂಡ ಹಿನ್ನೆಲೆಯನ್ನು ವಿವರಿಸಿದರು. ವಿಧಾನ ಮಂಡಳದ ಕಲಾಪವನ್ನು ನೇರಪ್ರಸಾರ ವ್ಯವಸ್ಥೆ ಕಲ್ಪಿಸುವ ಮೂಲಕ ಪ್ರತಿಯೊಂದು ವಿಷಯವನ್ನು ಸಾರ್ವಜನಿಕರಿಗೆ ತಲುಪಿಸಲಾಗುತ್ತಿದೆ. ಅದೇ ರೀತಿ ಡಿಸೆಂಬರ್‌ನಲ್ಲಿ ನಡೆಯಲಿರುವ ಅಧಿವೇಶನದಲ್ಲಿ ಕೂಡ ಇದೇ ರೀತಿಯ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಸಭಾಪತಿ ತಿಳಿಸಿದರು. ಅಧಿವೇಶನದ ಸಿದ್ಧತೆ ಕುರಿತು ಪೂರ್ವಭಾವಿ ಸಭೆಗಳನ್ನು ನಡೆಸಿ ಸೂಕ್ತ ನಿರ್ದೇಶನಗಳನ್ನು ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಎಂ.ಜಿ.ಹಿರೇಮಠ ತಿಳಿಸಿದರು.

ವಿಧಾನ ಪರಿಷತ್ತಿನ ಕಾರ್ಯದರ್ಶಿ ಮಹಾಲಕ್ಷ್ಮೀ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಸಂಜೀವಕುಮಾರ್ ಹುಲಕಾಯಿ, ಎನ್.ಐ.ಸಿ. ಅಧಿಕಾರಿ ಸಂಜೀವಕುಮಾರ್ ಕ್ಷೀರಸಾಗರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪ ನಿರ್ದೇಶಕ ಗುರುನಾಥ ಕಡಬೂರ ಸೇರಿದಂತೆ ಇ-ಗವರ್ನನ್ಸ್, ಎನ್.ಐ.ಸಿ., ಹೆಸ್ಕಾಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಂಡಿದ್ದರು.

ಉದಯಕಾಲ

# ಚಳಿಗಾಲ ಅಧಿವೇಶನದಲ್ಲಿ ಉ.ಕ. ಸಮಸ್ಯೆಗಳ ಚರ್ಚೆಗೆ ಒತ್ತು ನೀಡಲು ಮನವಿ



**ಬೆಳಗಾವಿ:** ಡಿಸೆಂಬರ್‌ನಲ್ಲಿ ನಡೆಯುವ ಚಳಿಗಾಲ ಅಧಿವೇಶನದಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆಗೆ ಒತ್ತು ನೀಡಿ ಸಮಸ್ಯೆಗಳ ಪರಿಹಾರಕ್ಕೆ ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಯವರಿಗೆ ಬೆಳಗಾವಿಯ ಕನ್ನಡ ಪರಸಂಘಟನೆಗಳು ಸೋಮವಾರ ಸುವರ್ಣ ಸೌಧದಲ್ಲಿ ಸಭಾಪತಿಗಳಿಗೆ ಶಾಲ ಒಡಿಸಿ ಸನ್ಮಾನಿಸಿ ಮನವಿಯನ್ನು ಮಾಡಿಕೊಂಡರು.

ನವ್ಹೆಂವರ್ 1ರಂದು ಬೆಂಗಳೂರಿನಲ್ಲಿ ವಿಧಾನ ಮಂಡಲದ ವತಿಯಿಂದ ಹಿರಿಯ ಕನ್ನಡ ಹೋರಾಟಗಾರ ಅಶೋಕ ಚಂದರಗಿ ಅವರಿಗೆ ನೀಡಿದ ಸನ್ಮಾನವು ಇಡೀ ಕರ್ನಾಟಕದ ಹೋರಾಟಗಾರರಿಗೆ ಸಂದ ಸನ್ಮಾನವೆಂದು ಕನ್ನಡ ಸಂಘಟನೆಗಳ ಮುಖಂಡರು ಸಭಾಪತಿಗಳಿಗೆ ತಿಳಿಸಿ ಅವರನ್ನು ಸನ್ಮಾನಿಸಿದರು. ಕನ್ನಡ ಮುಖಂಡರಾದ

ಸರ್ವಶ್ರೀ ಅಶೋಕ ಚಂದರಗಿ, ಮಹಾದೇವ ತಳವಾರ, ದೀಪಕ ಗುಡಗನಟ್ಟಿ, ಶಿವಪ್ಪ ಶಮರಂತ, ಮೈನೋದ್ದೀನ್ ಮಕಾನದಾರ, ಶಂಕರ ಬಾಗೇವಾಡಿ, ವಿರೇಂದ್ರ ಗೋಬರಿ, ಸುರೇಶ ಗವನ್ನವರ, ಸುರೇಶ ಕಿರಾಯಿ, ನಾಗರಾಜ ಲಕ್ಕಪ್ಪಗೋಳ, ಪ್ರಕಾಶ ಪಾನ್ಯಾಗೋಳ, ಪರಶುರಾಮ ಕುರಣೆ ಮತ್ತಿತರರು ಕನ್ನಡಪರ ಹೋರಾಟಗಾರರು ಉಪಸ್ಥಿತರಿದ್ದರು.